# ಕರ್ನಾಟಕ ವಿಧಾನ ಪರಿಷತ್ತು
## ನೂರ ಇಪ್ಪತ್ತೈದನೆಯ ಅಧಿವೇಶನ
## ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ: 16ನೇ ಜುಲೈ, 2014

(ಸಮಯ: ಬೆಳಗ್ಗೆ 11.00 ಗಂಟೆಗೆ)

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೆಯ ಪಟ್ಟಿ

ಆ) <u>ತಡೆಹಿಡಿಯಲಾದ ಪ್ರಶ್ನೆ:</u>

(1) 8 ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಭಾನುಪ್ರಕಾಶ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 110(481)

(2) 15 ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಆಚಾರ್ ಹಾಲಪ್ಪ ಬಸಪ್ಪ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 221(1244)

} ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

(3) 8 ನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ರಘುನಾಥರಾವ್ ಮಲ್ಕಾಪೂರೆ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 114(505) : ಮಾನ್ಯ ಅರಣ್ಯ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿನೆಂಟನೆಯ ಪಟ್ಟಿ

### 02. ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ ಎಪ್ಪತ್ತೈದನೆಯ ವರದಿಯ ಮೇಲೆ ಚರ್ಚೆ

### 03. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲೆ ಚರ್ಚೆ

*ಶ್ರೀಯುತರುಗಳಾದ:*
*ಕೆ.ಎಸ್. ಈಶ್ವರಪ್ಪ, ವಿ.ಪ.ನಾ.*
*ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ವಿ.ಪ.ಮು.ಸ.*
*ಸೋಮಣ್ಣ ಮ. ಬೇವಿನಮರದ,*
*ಆರ್.ಕೆ. ಸಿದ್ಧರಾಮಣ್ಣ ಹಾಗೂ*
*ಆಚಾರ್ ಹಾಲಪ್ಪ ಬಸಪ್ಪ*

} ರಾಜ್ಯದಲ್ಲಿ ರೈಲ್ವೇ ಯೋಜನೆಗಳಿಗೆ ರಾಜ್ಯ ಸರ್ಕಾರವು ಹಣ ಮತ್ತು ಜಮೀನನ್ನು ಕೊಡಲು ಸಾಧ್ಯವಿಲ್ಲವೆಂದು ಕೈಗೊಂಡಿರುವ ನಿರ್ಣಯದ ಬಗ್ಗೆ ಪ್ರಸ್ತಾಪಿಸುವುದು.

..2

## 04. ಇಲಾಖಾ ನೀತಿ ಮತ್ತು ಕಾರ್ಯಾಚರಣೆ ಬಗ್ಗೆ ಚರ್ಚೆ

1) ಮಕ್ಕಳ ಹಕ್ಕುಗಳ ರಕ್ಷಣೆ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ;
2) ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ನೀತಿ ಮತ್ತು ಕಾರ್ಯಾಚರಣೆ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ;
3) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೀತಿ ಮತ್ತು ಕಾರ್ಯಾಚರಣೆ ಮೇಲೆ ಚರ್ಚೆ.

## 05. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀಯುತರುಗಳಾದ: ಬಸವರಾಜ ಹೊರಟ್ಟಿ, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ವಿ.ಪ.ಮು.ಸ., ಮರಿತಿಬ್ಬೇಗೌಡ, ಹಾಗೂ ಅರುಣ ಶಹಾಪುರ** ಅವರುಗಳು ಕಾಲೇಜು ಶಿಕ್ಷಣ ಇಲಾಖೆ ಸುತ್ತೋಲೆಯನ್ನು ಹೊರಡಿಸಿ, ಅನುದಾನರಹಿತ ಅವಧಿಯಲ್ಲಿ ಸಲ್ಲಿಸಿರುವ ಸೇವಾವಧಿಯನ್ನು ಪರಿಗಣಿಸಿ ವೇತನ, ಪಿಂಚಣಿ ಹಾಗೂ ಇತರೆ ಸೇವಾ ಸೌಲಭ್ಯಗಳನ್ನು ಮಂಜೂರು ಮಾಡದಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರ** ಗಮನ ಸೆಳೆಯುವುದು.

ಆ) **ಶ್ರೀ ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಜಿಲ್ಲೆ, ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಮಳೆಯಿಂದಾಗಿ ಐದು ಸಾವಿರ ಹೆಕ್ಟರ್‌ನಷ್ಟು ಮಾವಿನ ಬೆಳೆ ನಾಶವಾಗಿರುವುದರಿಂದ, ರೈತರಿಗೆ ಪರಿಹಾರ ನೀಡುವ ಬಗ್ಗೆ **ಮಾನ್ಯ ಕಂದಾಯ ಸಚಿವರ** ಗಮನ ಸೆಳೆಯುವುದು.

ಇ) **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯದ ಪ್ರತಿ ಗ್ರಾಮ ಪಂಚಾಯತ್‌ಗಳಲ್ಲಿ ಪಡಿತರ ಚೀಟಿಯ ನಿರ್ವಹಣೆಗೆ ಸಂಬಂಧಿಸಿದಂತೆ ಕಾರ್ಡ್ ಒಂದಕ್ಕೆ ರೂ. 50/- ಗಳನ್ನು ಪಡೆಯುತ್ತಿದ್ದು, ಆ ಮೊತ್ತವನ್ನು ಸರ್ಕಾರಕ್ಕೆ ಪಾವತಿಸದೆ ಸಂಬಂಧಪಟ್ಟ ಗ್ರಾಮ ಪಂಚಾಯತ್ ವ್ಯಾಪ್ತಿಗೆ ವಿನಿಯೋಗಿಸಲು ಆದೇಶ ಹೊರಡಿಸುವ ಬಗ್ಗೆ **ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರ** ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

ಅ) **ಶ್ರೀ ಕೆ.ಬಿ. ಶಾಣಪ್ಪ** ಅವರು ರಾಜ್ಯದಲ್ಲಿ ಭೋವಿ ಜನಾಂಗವನ್ನು ಪರಿಶಿಷ್ಟ ಜನಾಂಗದ ಪಟ್ಟಿಗೆ ಸೇರಿಸಿದ್ದರೂ ಸಹ ಕೆಲವು ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಪ್ರಮಾಣ ಪತ್ರವನ್ನು ನೀಡಲು ತಕರಾರು ಮಾಡುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)**

ಆ) **ಶ್ರೀ ವಿ.ಎಸ್. ಉಗ್ರಪ್ಪ** ಅವರು ರಾಮಾಯಣವನ್ನು ರಚಿಸಿದ ಮಹರ್ಷಿ ವಾಲ್ಮೀಕಿ ಮತ್ತು ವಂಶಸ್ಥರಿಗೆ ಅಪಮಾನ ಮಾಡುವ ಹಾಗೂ ಸಮಾಜದ ಸಾಮರಸ್ಯವನ್ನು ಕದಡುವಂತಹ ಕಾನೂನು ಬಾಹಿರವಾದ ಕೃತಿಯನ್ನು ಬರೆದಿರುವ ಲೇಖಕರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಗೃಹ ಸಚಿವರು)**

**ವಿ. ಶ್ರೀಶ್**
**ಕಾರ್ಯದರ್ಶಿ**